**All India Radio: Bangalore**
**Regional Bulletin In Kannada**
**08.04.2026 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**08.04.2026 / 2.30 p.m.**
**<><><><>**

ಮುಖ್ಯಾಂಶಗಳು

1. ರಾಜ್ಯದಲ್ಲಿ ಆಟೋಗ್ಯಾಸ್ ಕೊರತೆ ಬಗ್ಗೆ ವದಂತಿಗಳಿಗೆ ಕಿವಿಗೊಡದಂತೆ ರಾಜ್ಯ ಸರ್ಕಾರ ಮನವಿ
2. ವಿಧಾನಸಭಾ ಉಪಚುನಾವಣೆ ; ಅಭ್ಯರ್ಥಿಗಳಿಂದ ಮನೆ ಮನೆ ಪ್ರಚಾರ
3. ಬೆಂಗಳೂರಿನಲ್ಲಿ ಬಾಹ್ಯಾಕಾಶ ನೌಕಾ ಕಾರ್ಯಾಚರಣೆಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನ ; ಇಸ್ರೋ ಅಧ್ಯಕ್ಷರಿಂದ ಉದ್ಘಾಟನೆ
4. ಚಿಕ್ಕಮಗಳೂರಿನ ಮುಳ್ಳಯ್ಯನಗಿರಿಯಲ್ಲಿ ಕೇರಳಂ ಬಾಲಕಿ ನಾಪತ್ತೆಪ್ರಕರಣ : ಪೊಲೀಸರಿಂದ ಶೋಧ ಕಾರ್ಯ

<><><><>

ರಾಜ್ಯದಲ್ಲಿ ಆಟೋ ಅನಿಲ ಕೊರತೆ ಬಗ್ಗೆ ಯಾವುದೇ ವದಂತಿಗಳಿಗೆ ಸಾರ್ವಜನಿಕರು ಕಿವಿಗೊಡದಿರಲು ರಾಜ್ಯ ಸರ್ಕಾರ ಮನವಿ ಮಾಡಿದೆ. ರಾಜ್ಯದಲ್ಲಿ ಆಟೋಗ್ಯಾಸ್ ಬಂಕ್‌ಗಳಲ್ಲಿ ಆಟೋ ಅನಿಲ ದಾಸ್ತಾನು ಕೊರತೆಯಾಗಿರುವುದಾಗಿ ಸುಳ್ಳು ವದಂತಿಗಳ ಆಧಾರದ ಮೇಲೆ ಆಟೋ ಮಾಲೀಕರು ಮತ್ತು ಚಾಲಕರು ಆಟೋ ಗ್ಯಾಸ್ ಬಂಕ್‌ಗಳ ಮುಂದೆ ಸರತಿ ಸಾಲಿನಲ್ಲಿ ನಿಂತಿರುವ ಕುರಿತ ಮಾಧ್ಯಮ ವರದಿ ಗಮನಿಸಿರುವ ಸರ್ಕಾರ ಸುಳ್ಳು ವದಂತಿಗಳನ್ನು ನಂಬದಿರಲು ಮನವಿ ಮಾಡಿದೆ. ಈ ಕುರಿತು ಪ್ರಕಟಣೆ ಹೊರಡಿಸಿರುವ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆ ಕೆಲವು ಖಾಸಗಿ ಪೂರೈಕೆ ಸಂಸ್ಥೆಗಳಲ್ಲಿ ಕೊರತೆ ಕಂಡುಬಂದಿರುವುದು ನಿಜವಾದರೂ ಅದನ್ನು ಸರಿದೂಗಿಸಲು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು ಹೆಚ್ಚುವರಿ ಗ್ಯಾಸ್ ಪೂರೈಕೆ ಮಾಡುತ್ತಿವೆ ಎಂದು ಸ್ಪಷ್ಟಪಡಿಸಿದೆ. ಕಳೆದ ೫ ದಿನಗಳಲ್ಲಿ ಸರಾಸರಿ ೮೩ ರಿಂದ ೯೪ ಮೆಟ್ರಿಕ್ ಟನ್ ಅನಿಲ ಪೂರೈಕೆ ಮಾಡಲಾಗುತ್ತಿದೆ ಎಂದು ಮಾಹಿತಿ ನೀಡಿದೆ.

<><><><>

ಬಾಗಲಕೋಟೆ ಹಾಗೂ ದಾವಣಗೆರೆ ದಕ್ಷಿಣ ವಿಧಾನಸಭಾ ಉಪಚುನಾವಣೆಗೆ ಬಹಿರಂಗ ಪ್ರಚಾರ ಕಾರ್ಯ ಮುಕ್ತಾಯಗೊಂಡ ಹಿನ್ನೆಲೆಯಲ್ಲಿ ಅಭ್ಯರ್ಥಿಗಳ ಮನೆ ಮನೆ ಭೇಟಿ ಆರಂಭಗೊಂಡಿದೆ. ಇಂದು ಮುಂಜಾನೆಯಿಂದಲೇ ಕಣದಲ್ಲಿರುವ ಪ್ರಮುಖ ರಾಜಕೀಯ ಪಕ್ಷಗಳ ಅಭ್ಯರ್ಥಿಗಳು ತಮ್ಮ ಬೆಂಬಲಿಗರೊಂದಿಗೆ ಮನೆ ಮನೆಗೆ ಭೇಟಿ ನೀಡಿ ಮತ ಯಾಚಿಸುತ್ತಿರುವ ದೃಶ್ಯ ಕಂಡುಬರುತ್ತಿದೆ. ದಾವಣಗೆರೆ ದಕ್ಷಿಣ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಮಲ್ಲಿಕಾರ್ಜುನ, ಮತ್ತು ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರು ತಮ್ಮ ಬೆಂಬಲಿಗರೊಂದಿಗೆ ಮತ ಯಾಚನೆ ಮಾಡುತ್ತಿದ್ದಾರೆ. ಈ ಮಧ್ಯೆ ಜಿಲ್ಲಾಡಳಿತ ನಾಳಿನ ಮತದಾನಕ್ಕಾಗಿ ಎಲ್ಲ ಅಗತ್ಯ ಸಿದ್ಧತೆಗಳನ್ನು ಮಾಡಿಕೊಂಡಿದೆ. ಮತದಾನಕ್ಕಾಗಿ ೨೮೪ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ನಗರ ವ್ಯಾಪ್ತಿಯಲ್ಲಿ ೨೩೪ ಮತ್ತು ಗ್ರಾಮೀಣ

ವ್ಯಾಪ್ತಿಯಲ್ಲಿ ೫೦ ಮತಗಟ್ಟೆಗಳು ಸೇರಿವೆ. ಪ್ರತಿ ಮತಗಟ್ಟೆಯಲ್ಲಿ ಕಾಯ್ದಿರಿಸಿದ ಕೊಠಡಿ, ಕುಡಿಯುವ ನೀರು, ರ‍್ಯಾಂಪ್ ವ್ಯವಸ್ಥೆ, ಶೌಚಾಲಯ, ನೆರಳು ಮತ್ತು ಕ್ಯೂ ಮ್ಯಾನೇಜ್‌ಮೆಂಟ್ ಫೀಡಿಂಗ್ ಕೊಠಡಿ ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಡಾ.ಜಿ.ಎಂ.ಗಂಗಾಧರ ಸ್ವಾಮಿ ತಿಳಿಸಿದ್ದಾರೆ. ೧೧೯ ಮಂದಿ ಹಿರಿಯ ನಾಗರಿಕರು ಮತ್ತು ವಿಶೇಷಚೇತನರು ಅಂಚೆ ಮೂಲಕ ಮನೆಯಿಂದಲೇ ಮತದಾನ ಮಾಡುವ ಪ್ರಕ್ರಿಯೆ ಪೂರ್ಣಗೊಳಿಸಿದ್ದಾರೆ ಎಂದು ಅವರು ಹೇಳಿದ್ದಾರೆ. ಇನ್ನೊಂದೆಡೆ ಬಾಗಲಕೋಟೆಯಲ್ಲಿ ಬಿಜೆಪಿ ಅಭ್ಯರ್ಥಿ ವೀರಣ್ಣ ಚರಂತಿಮಠ ಹಾಗೂ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಮನೆ ಮನೆಗೆ ತೆರಳಿ ಮತ ಯಾಚಿಸಿದರು.

<><><><>

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ, ಇನ್‌ಸ್ಪೇಸ್ ಮತ್ತು ಭಾರತೀಯ ಆಸ್ಟ್ರೊನಾಟಿಕಲ್ ಸಂಘ-ಎಎಸ್‌ಐ, ಸಹಯೋಗದಲ್ಲಿ ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ಮೂರು ದಿನಗಳ ಬಾಹ್ಯಾಕಾಶ ನೌಕಾ ಕಾರ್ಯಾಚರಣೆಗಳ ಕುರಿತ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಇಸ್ರೋ ಅಧ್ಯಕ್ಷ ಡಾ.ವಿ.ನಾರಾಯಣನ್ ಉದ್ಘಾಟಿಸಿದರು. ಈ ವೇಳೆ ಮಾತನಾಡಿದ ಅವರು, ಬಾಹ್ಯಾಕಾಶ ಯೋಜನೆಗಳ ಯಶಸ್ಸನ್ನು ನಿರ್ಧರಿಸುವಲ್ಲಿ ನೌಕೆಗಳ ಕಾರ್ಯಾಚರಣಾ ನಿರ್ವಹಣೆ ಅತ್ಯಂತ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತದ ಮಹತ್ವಾಕಾಂಕ್ಷೆಯ ಗಗನಯಾನ ಯೋಜನೆಯಡಿ ಕೈಗೊಳ್ಳಲಾಗುವ ಮೊದಲ ಮಾನವರಹಿತ ಬಾಹ್ಯಾಕಾಶ ಯಾನಕ್ಕೆ ಸಂಬಂಧಿಸಿದ ಎಲ್ಲಾ ಚಟುವಟಿಕೆಗಳು ಅತ್ಯಂತ ಯಶಸ್ವಿಯಾಗಿ ಸಾಗಿವೆ ಎಂದು ಹೇಳಿದರು. ಈ ಯೋಜನೆಯ ವೇಳಾಪಟ್ಟಿಯನ್ನು ಸೂಕ್ತ ಸಮಯಕ್ಕೆ ಪ್ರಕಟಿಸಲಾಗುವುದು. ಗಗನಯಾನ ಮಿಷನ್ ಒಂದು ಹೊಸ ತಂತ್ರಜ್ಞಾನ ಆಧಾರಿತ ಬಾಹ್ಯಾಕಾಶ ಕಾರ್ಯಕ್ರಮವಾಗಿದೆ. ಮೊಟ್ಟಮೊದಲ ಬಾರಿಗೆ ಉಡ್ಡಯನ ನೌಕೆಯಲ್ಲಿ ಗಗನಯಾತ್ರಿಗಳು ಗಗನಯಾನ ಕೈಗೊಳ್ಳಲಿದ್ದಾರೆ. ಅವರ ಸುರಕ್ಷತೆಗೆ ಸೂಕ್ತ ತಂತ್ರಜ್ಞಾನ ಅಭಿವೃದ್ಧಿಪಡಿಸಬೇಕಿದೆ. ಗಗನಯಾನಿ ಸುರಕ್ಷತಾ ವ್ಯವಸ್ಥೆಯನ್ನು ಈಗಾಗಲೇ ಪರಿಸರ ನಿಯಂತ್ರಣಾ ಸುರಕ್ಷತಾ ವ್ಯವಸ್ಥೆಯನ್ನು ಈಗಾಗಲೇ ಅಭಿವೃದ್ಧಿಪಡಿಸಲಾಗಿದೆ ಎಂದು ಇಸ್ರೋ ಅಧ್ಯಕ್ಷ ಡಾ.ವಿ.ನಾರಾಯಣನ್ ತಿಳಿಸಿದ್ದಾರೆ.

**ಧ್ವನಿ : ಡಾ.ವಿ.ನಾರಾಯಣನ್**

<><><><>

ಆರ್‌ಎಸ್‌ಎಸ್ ಮತ್ತು ಬಿಜೆಪಿ ವಿರುದ್ಧ ವಿವಾದಾತ್ಮಕ ಹೇಳಿಕೆ ನೀಡಿರುವ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ್ ಖರ್ಗೆ ಅವರ ವಿರುದ್ಧ ವಿಧಾನಸಭೆ ವಿರೋಧಪಕ್ಷದ ನಾಯಕ ಆರ್.ಅಶೋಕ, ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿಂದು ಈ ಕುರಿತು ಅಭಿಪ್ರಾಯ ಹಂಚಿಕೊಂಡಿರುವ ಅವರು, ದ್ವೇಷ ಭಾಷಣ ಕಾಯ್ದೆ ಕಾಂಗ್ರೆಸ್ ಆಡಳಿತವಿರುವ ರಾಜ್ಯಗಳಲ್ಲಿ ಆಯ್ದ ವ್ಯಕ್ತಿಗಳಿಗೆ ಮಾತ್ರ ಅನ್ವಯಿಸುತ್ತದೆಯೇ ಎಂದು ಪ್ರಶ್ನಿಸಿದ್ದಾರೆ. ಹಿಂದೂ ಭಾವನೆಗಳಿಗೆ ಧಕ್ಕೆ ತರುವ ಅಥವಾ ಪ್ರಚೋದನಾಕಾರಿ ಹೇಳಿಕೆಗಳು ಬಂದಾಗ ಕಾನೂನುನನ್ನು

ಅನುಕೂಲಕ್ಕೆ ತಕ್ಕಂತೆ ನಿರ್ಲಕ್ಷಿಸಲಾಗುತ್ತಿದೆಯೇ ಎಂದು ಪ್ರಶ್ನಿಸಿರುವ ಅವರು, ಸಮಾಜದಲ್ಲಿ ದ್ವೇಷ ಮತ್ತು ವಿಭಜನೆಯನ್ನು ಬಿತ್ತುವಂತಹ ನುಡಿಗಳನ್ನು ಬಳಸಲಾಗುತ್ತಿದೆ ಎಂದು ಆರ್.ಅಶೋಕ ಆರೋಪಿಸಿದ್ದಾರೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಮುಳ್ಳಯ್ಯನಗಿರಿ ಪ್ರವಾಸಿತಾಣಕ್ಕೆ ಪ್ರವಾಸಕ್ಕೆ ಬಂದಿದ್ದ ಕೇರಳ ರಾಜ್ಯದ ಪಾಲಕ್ಕಾಡ್ ಮೂಲದ ನಂದನಾ ಎಂಬ ೧೪ ವರ್ಷದ ಬಾಲಕಿ ಕಾಣೆಯಾಗಿದ್ದು ಪೊಲೀಸರು ಪತ್ತೆ ಕಾರ್ಯದಲ್ಲಿ ತೊಡಗಿದ್ದಾರೆ. ಕೇರಳದಿಂದ ಚಿಕ್ಕಮಗಳೂರಿಗೆ ಸುಮಾರು ೪೦ ಮಂದಿ ತಂಡ ಪ್ರವಾಸಕ್ಕೆ ಬಂದಿದ್ದು ಕಾಣೆಯಾಗಿರುವ ಈ ಬಾಲಕಿ ಕುಟುಂಬಸ್ಥರೊಡನೆ ಆಗಮಿಸಿದ್ದಳು. ಮುಳ್ಳಯ್ಯನಗಿರಿ ಸಮೀಪದ ಮಾಣಿಕ್ಯಧಾರ ಜಲಪಾತದ ಬಳಿ ನಿನ್ನೆ ಸಂಜೆ ಕಾಣೆಯಾಗಿದ್ದಾಳೆ. ವಿಷಯ ತಿಳಿದು ಸ್ಥಳಕ್ಕೆ ತೆರಳಿದ ಚಿಕ್ಕಮಗಳೂರು ಪೊಲೀಸರು ಶೋಧ ಕಾರ್ಯದಲ್ಲಿ ತೊಡಗಿದ್ದಾರೆ. ಅಗ್ನಿಶಾಮಕ ಹಾಗೂ ಪೊಲೀಸ್ ಸೇರಿ ಸುಮಾರು ೩೦ ಸಿಬ್ಬಂದಿ ಡ್ರೋಣ್ ಕ್ಯಾಮೆರಾ ಸಹಿತ ಶೋಧ ಕಾರ್ಯದಲ್ಲಿ ತೊಡಗಿದ್ದಾರೆ.

<><><><>

ಮಹಿಳಾ ಸಬಲೀಕರಣ ಮತ್ತು ಅವರ ಹಕ್ಕುಗಳ ರಕ್ಷಣೆಯ ಮೇಲೆ ಗಮನಹರಿಸುವ ನಾರಿಶಕ್ತಿ ವಂದನಾ ಅಭಿಯಾನ ಮಹಿಳೆಯರಿಗೆ ಸಮಾನ ಅವಕಾಶಗಳು ಮತ್ತು ಸುರಕ್ಷತೆಯನ್ನು ಒದಗಿಸುವ ಗುರಿಯನ್ನು ಹೊಂದಿದೆ ಎಂದು ವಿಜಯಪುರದ ಯೋಜನಾ ಫಲಾನುಭವಿ ಎನ್.ಸವಿತಾ ತಿಳಿಸಿದ್ದಾರೆ. ಆಕಾಶವಾಣಿಯೊಂದಿಗೆ ತಮ್ಮ ಅನಿಸಿಕೆ ಹಂಚಿಕೊಂಡಿರುವ ಅವರು, ಮಹಿಳಾ ನೇತೃತ್ವದ ಅಭಿವೃದ್ಧಿಯ ಕಡೆಗೆ ಕೇಂದ್ರ ಸರ್ಕಾರದ ಬದ್ಧತೆಯನ್ನು ಇದು ಸೂಚಿಸುತ್ತದೆ. ಕೆಲಸದ ಸ್ಥಳದಲ್ಲಿ ಕಿರುಕುಳವನ್ನು ವರದಿ ಮಾಡಲು ಸಹಾಯ ಮಾಡುವ ಜೊತೆಗೆ ಸಮುದಾಯ ಆಧಾರಿತ ನ್ಯಾಯವನ್ನು ಉತ್ತೇಜಿಸುತ್ತದೆ ಎಂದರು.

**ಧ್ವನಿ : ಎನ್.ಸವಿತಾ**

<><><><>

ಬಳ್ಳಾರಿ ಜಿಲ್ಲೆಯಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಬಹುದಾದ ಹೆಚ್‌ಪಿವಿ ಲಸಿಕೆಯನ್ನು ೧೪ ವರ್ಷದ ೨ ಸಾವಿರದ ೫೯೧ ಹೆಣ್ಣು ಮಕ್ಕಳಿಗೆ ಈವರೆಗೆ ನೀಡಲಾಗಿದೆ ಎಂದು ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಹನುಮಂತಪ್ಪ ಹೇಳಿದ್ದಾರೆ. ಜಿಲ್ಲೆಯ ೧೬ ಲಕ್ಷದ ೪೯ ಸಾವಿರದ ೪೯೨ ಒಟ್ಟು ಜನಸಂಖ್ಯೆಯಲ್ಲಿ ಶೇಕಡ ೧ ರಷ್ಟು ೧೪ ವರ್ಷದ ಹೆಣ್ಣು ಮಕ್ಕಳು ಅಂದರೆ ೧೬ ಸಾವಿರದ ೪೯೫ ಹೆಣ್ಣು ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿತ್ತು. ಇಲ್ಲಿಯವರೆಗೆ ಒಟ್ಟು ೨ ಸಾವಿರದ ೫೯೧ ಹೆಣ್ಣು ಮಕ್ಕಳಿಗೆ ಲಸಿಕೆ ನೀಡಲಾಗಿದೆ ಎಂದು ಮಾಹಿತಿ ನೀಡಿದ್ದಾರೆ. ಮಾರ್ಚ್ ೧೧ ರಿಂದ ಆರಂಭವಾಗಿರುವ ಈ ಲಸಿಕಾ ಕಾರ್ಯಕ್ರಮ ೯೦ ದಿನಗಳವರೆಗೆ ಮುಂದುವರೆಯಲಿದೆ.  ಪಾಲಕರು ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಕೋರಿದ್ದಾರೆ.

<><><><>

ರಾಜ್ಯಸರ್ಕಾರ ಸರ್ಕಾರಿ ಹುದ್ದೆಗಳಿಗೆ ನೇಮಕಾತಿ ಅಧಿಸೂಚನೆಯನ್ನು ಹೊರಡಿಸದೆ ವಿಳಂಬ ಧೋರಣೆ ತೋರುತ್ತಿರುವುದನ್ನು ಖಂಡಿಸಿ, ಕೋಲಾರ ಹೊರವಲಯದಲ್ಲಿರುವ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಸಂಘಟನೆ ಪ್ರತಿಭಟನೆ ನಡೆಸಿ, ಜಿಲ್ಲಾಧಿಕಾರಿ ಎಂ.ಆರ್.ರವಿ ಅವರಿಗೆ ಮನವಿ ಸಲ್ಲಿಸಿದೆ. ಈ ಸಂದರ್ಭದಲ್ಲಿ ಮಾತನಾಡಿರುವ ಅಖಿಲ ಕರ್ನಾಟಕ ರಾಜ್ಯ ವಿದ್ಯಾರ್ಥಿಗಳ ಸಂಘಟನೆಯ ಜಿಲ್ಲಾಧ್ಯಕ್ಷ ಚಂದ್ರಪ್ಪ, ರಾಜ್ಯದ ವಿವಿಧ ಇಲಾಖೆಯಲ್ಲಿ ಖಾಲಿರುವ ಹುದ್ದೆಗಳಿಗೆ ಈ ಕೂಡಲೇ ನೇಮಕಾತಿ ಅಧಿಸೂಚನೆಯನ್ನು ಹೊರಡಿಸಬೇಕು. ಕೆಲವು ವರ್ಷಗಳಿಂದ ನೇಮಕಾತಿ ಪ್ರಕ್ರಿಯೆ ನಡೆದಿಲ್ಲವಾಗಿರುವುದಿಂದ ವಯೋಮಿತಿಯನ್ನು ಹೆಚ್ಚಿಸಬೇಕು ಎಂದರು.

<><><><>

ಇನ್ನು ಹವಾವರ್ತಮಾನ,

ರಾಜ್ಯದಲ್ಲಿ ಮುಂದಿನ ಕೆಲವು ದಿನಗಳಲ್ಲಿ ದಕ್ಷಿಣ ಒಳನಾಡಿನ ಕೋಲಾರ, ಚಿಕ್ಕಬಳ್ಳಾಪುರ, ಮೈಸೂರು ಮತ್ತು ಕೊಡಗಿನಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಕರಾವಳಿ ಕರ್ನಾಟಕ ಉತ್ತರ ಒಳನಾಡಿನಲ್ಲಿ ಒಣಹವೆ ಮುಂದುವರೆಯುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಬೆಂಗಳೂರು ನಗರದಲ್ಲಿ ಮುಂದಿನ ೪೮ ಗಂಟೆಗಳ ಕಾಲ ಶುಭ್ರ ಆಕಾಶ ಇರಲಿದ್ದು, ಗರಿಷ್ಠ ೩೫, ಕನಿಷ್ಠ ೨೨ ಡಿಗ್ರಿ ಸೆಲ್ಸಿಯಸ್ ತಾಪಮಾನ ದಾಖಲಾಗುವ ಸಂಭವವಿದೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>